ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
**KARNATAKA LEGISLATIVE ASSEMBLY RESEARCH AND REFERENCE BRANCH**

ಪತ್ರಿಕಾ ತುಣುಕುಗಳು
**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ಸಂಸತ್

ಪತ್ರಿಕೆಯ ಹೆಸರು : NAME OF THE NEWS PAPER: ಪ್ರಜಾವಾಣಿ    ದಿನಾಂಕ : DATE : 14/12/2019

# ಚಳಿಗಾಲದ ಅಧಿವೇಶನ 15 ಮಸೂದೆಗಳ ಅಂಗೀಕಾರ

ಶುಕ್ರವಾರವಷ್ಟೇ ಮುಗಿದ ಸಂಸತ್ತಿನ ಚಳಿಗಾಲದ ಅಧಿವೇಶನದಲ್ಲಿ ಎರಡೂ ಸದನಗಳ ಉತ್ಪಾದಕತೆ ಶೇ 100ರ ಗಡಿ ಮುಟ್ಟಿವೆ ಎಂದು ಸಂಸದೀಯ ವ್ಯವಹಾರಗಳ ಸಚಿವ ಪ್ರಹ್ಲಾದ್ ಜೋಶಿ ಹೇಳಿದ್ದಾರೆ



| | |
|---|---|
| ಲೋಕಸಭೆಯಲ್ಲಿ ಅಂಗೀಕಾರವಾದ ಮಸೂದೆಗಳು | 14 |
| ರಾಜ್ಯಸಭೆಯಲ್ಲಿ ಅಂಗೀಕಾರವಾದ ಮಸೂದೆಗಳು | 15 |
| ಎರಡೂ ಸದವಗಳಲ್ಲಿ ಅಂಗೀಕಾರವಾದ ಮಸೂದೆಗಳು | 15 |

ಆಧಾರ: ಪಿಟಿಐ

# 2022ಕ್ಕೆ ಹೊಸ ಕಟ್ಟಡದಲ್ಲಿ ಸಂಸತ್ ಅಧಿವೇಶನ

ನವದೆಹಲಿ (ಪಿಟಿಐ): 'ಭಾರತ 75ನೇ ಸ್ವಾತಂತ್ರ್ಯ ಸಂಭ್ರಮ ಆಚರಿಸುವ ವೇಳೆಗೆ (2022) ಸಂಸತ್ ಅಧಿವೇಶನ ಹೊಸ ಕಟ್ಟಡದಲ್ಲಿ ನಡೆಯಲಿದೆ' ಎಂದು ಲೋಕಸಭೆ ಸಭಾಧ್ಯಕ್ಷ ಓಂ ಬಿರ್ಲಾ ತಿಳಿಸಿದರು.

ಚಳಿಗಾಲದ ಅಧಿವೇಶದ ಮುಕ್ತಾಯದ ಹಿನ್ನೆಲೆಯಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಬಿರ್ಲಾ, '2022ರ ವೇಳೆಗೆ ಹೊಸ ಕಟ್ಟಡ ನಿರ್ಮಾಣವಾಗುವ ಭರವಸೆ ಇದೆ. ಕಟ್ಟಡ ನಿರ್ಮಾಣಕ್ಕೆ ಎರಡು–ಮೂರು ಜಾಗಗಳನ್ನು ಸರ್ಕಾರ ಗುರುತಿಸಿದೆ. ಹೊಸ ಕಟ್ಟಡದಲ್ಲಿ ಹಲವು ತಾಂತ್ರಿಕ ವ್ಯವಸ್ಥೆಗಳಿರಲಿದ್ದು, ಸಂಸದರು ಕುಳಿತುಕೊಳ್ಳುವ ಜಾಗದಲ್ಲಿ ಆನ್‌ಲೈನ್ ಮಾಹಿತಿ ವ್ಯವಸ್ಥೆ ಇರಲಿದೆ' ಎಂದರು.